## ಕರ್ನಾಟಕ ಸರ್ಕಾರ ನಡವಳಿ

ವಿಷಯ: ಕರ್ನಾಟಕ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ಸಮವಸ್ತ್ರ ಭತ್ಯೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 31 ಎಸ್‌ಆರ್‌ಪಿ 2007(XI) ದಿನಾಂಕ:14-08-2008

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ 14-08-2008ರ ಸರ್ಕಾರಿ ಆದೇಶದಲ್ಲಿ 5ನೇ ವೇತನ ಆಯೋಗದ ಶಿಫಾರಸ್ಸಿನಂತೆ ಕೆಲವೊಂದು ವರ್ಗದ ಹುದ್ದೆಗಳಿಗೆ ನೀಡುತ್ತಿದ್ದ ಸಮವಸ್ತ್ರ ಭತ್ಯೆಯ ದರಗಳನ್ನು ಪರಿಷ್ಕರಿಸಲಾಗಿತ್ತು. ಈಗ ಕರ್ನಾಟಕ ಭವನದ ನಿವಾಸಿ ಆಯುಕ್ತರು ಕರ್ನಾಟಕ ಭವನ, ನವದೆಹಲಿಯು ಗಣ್ಯ ಮತ್ತು ಅತಿ ಗಣ್ಯ ವ್ಯಕ್ತಿಗಳಿಗೆ ಆತಿಥ್ಯ ನೀಡುವ ಕಚೇರಿಯಾಗಿದ್ದು, ಇಂತಹ ಶಿಷ್ಟಾಚಾರ ಕಾರ್ಯ ನಿರ್ವಹಿಸುವ ನೌಕರರು ಸಮವಸ್ತ್ರ ಧರಿಸುವುದು ಸೂಕ್ತವಾಗಿರುವುದರಿಂದ ಅವರಿಗೆ ಸಮವಸ್ತ್ರ ಭತ್ಯೆಯನ್ನು ನೀಡಬೇಕೆಂದು ಕೋರಿದ್ದಾರೆ. ಈ ಪ್ರಸ್ತಾವನೆಯನ್ನು ಪರಿಶೀಲಿಸಿ ದಿನಾಂಕ 14-8-2008ರ ಸರ್ಕಾರಿ ಆದೇಶವನ್ನು ಮುಂದುವರಿಸುತ್ತಾ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ 26 ಎಸ್‌ಆರ್‌ಪಿ 2011,**
**ಬೆಂಗಳೂರು ದಿನಾಂಕ: 21ನೇ ಏಪ್ರಿಲ್ 2011.**

ನವದೆಹಲಿಯ ಕರ್ನಾಟಕ ಭವನದ ಈ ಕೆಳಕಂಡ ನೌಕರರಿಗೆ ಅವುಗಳ ಮುಂದೆ ತೋರಿಸಿದ ದರದಲ್ಲಿ ಸಮವಸ್ತ್ರ ಭತ್ಯೆಯನ್ನು ತತ್‌ಕ್ಷಣದಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

(1) 'ಸಿ' ಗುಂಪಿನ ನೌಕರರು - ಪ್ರತಿ ಎರಡು ವರ್ಷಗಳಿಗೊಮ್ಮೆ ರೂ.5,000/- (ಪ್ರತಿಯೊಬ್ಬರಿಗೆ)
(2) 'ಡಿ' ಗುಂಪಿನ ನೌಕರರು - ವಾರ್ಷಿಕ ರೂ.2,000/- (ಪ್ರತಿಯೊಬ್ಬರಿಗೆ)

2. ಈ ನೌಕರರು ಧರಿಸಬೇಕಾದ ಸಮವಸ್ತ್ರ ನಮೂನೆಯನ್ನು ನಿವಾಸಿ ಆಯುಕ್ತರು ಪ್ರತ್ಯೇಕವಾಗಿ ನಿಗದಿಪಡಿಸತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ಸುಂದರ ರಾಜ ಗುಪ್ತ)
**ಸರ್ಕಾರದ ಉಪಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-2).**

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.
3. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
4. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
5. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
6. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
7. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
8. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.
10. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ.
11. ವಾರಪತ್ರ / ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**